ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **914**
ಸದಸ್ಯರ ಹೆಸರು : ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 20.09.2021
ಉತ್ತರಿಸುವ ಸಚಿವರು : ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.

*****

	ಪ್ರಶ್ನೆ	ಉತ್ತರ
ಅ)	ವಿದ್ಯುತ್ ದರವನ್ನು ಪದೇ ಪದೇ ಏರಿಸುವುದರಿಂದ ಜನರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ವಿದ್ಯುತ್ ದರವನ್ನು ಹೆಚ್ಚಿಸಲು ಕಾರಣವಾಗುವ ಪ್ರಮುಖ ಅಂಶಗಳು ಈ ಕೆಳಕಂಡಂತಿವೆ: 1. ವಿದ್ಯುತ್ ಬೇಡಿಕೆಯನ್ನು ಪೂರೈಸಲು ಹೊಸ ಉಷ್ಣಕೇಂದ್ರ ಹಾಗೂ ನವೀಕರಿಸಬಹುದಾದ ಇಂಧನ ಮೂಲಗಳಿಂದ ವಿದ್ಯುತ್ತನ್ನು ಖರೀದಿಸಬೇಕಾಗಿರುವುದರಿಂದ ವಿದ್ಯುತ್ ಖರೀದಿಯ ವೆಚ್ಚವು ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿದೆ. ಆದುದರಿಂದ ಜಕಾತಿ ಹೆಚ್ಚಳವು ಅನಿವಾರ್ಯವಾಗಿದೆ. 2. ದೀರ್ಘಕಾಲದ ವಿದ್ಯುತ್ ಖರೀದಿ ಒಪ್ಪಂದಗಳಿಂದಾಗಿ ವಿದ್ಯುತ್ ಸರಬರಾಜು ಕಂಪನಿಗಳು ಉಷ್ಣಕೇಂದ್ರಗಳಿಗೆ ಪ್ರತಿ ತಿಂಗಳು ನಿಗದಿತ ವೆಚ್ಚವನ್ನು ಭರಿಸಬೇಕಾಗುತ್ತದೆ. 3. ಇದಲ್ಲದೆ, ನೌಕರರ ಸಂಬಳದ ಪರಿಷ್ಕರಣೆ, ಕಾರ್ಯ ಮತ್ತು ನಿರ್ವಹಣಾ ವೆಚ್ಚ, ಬಂಡವಾಳ ವೆಚ್ಚ ಮತ್ತು ಕಾರ್ಯನಿರತ ಬಂಡವಾಳಕ್ಕಾಗಿ ಸಾಲಗಳ ಮೇಲಿನ ಬಡ್ಡಿ ವೆಚ್ಚಗಳು ಜಕಾತಿ ಪರಿಷ್ಕರಣೆಯಲ್ಲಿ ಒಳಗೊಂಡಿರುತ್ತದೆ. 4. ವಿದ್ಯುತ್ ಖರೀದಿ ವೆಚ್ಚ ಮತ್ತು ವಿದ್ಯುತ್ ಮಾರಾಟದಿಂದ ಬರುತ್ತಿರುವ ವ್ಯತ್ಯಾಸವು ಹೆಚ್ಚಾಗುತ್ತಿದ್ದು, ವಿದ್ಯುತ್ ದರ ಪರಿಶೆಂಯು ಅನಿವಾರ್ಯವಾಗಿರುತ್ತದೆ. ದರ ನಿಗದಿಪಡಿಸುವ ಅಧಿಕಾರವು ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ ವ್ಯಾಪ್ತಿಗೆ ಒಳಪಟ್ಟಿರುತ್ತದೆ.
ಆ)	ವಿದ್ಯುತ್ ಕಳ್ಳತನ ಮತ್ತು ವಿದ್ಯುತ್ ಸೋರುವಿಕೆಯನ್ನು ಕಟ್ಟುನಿಟ್ಟಾಗಿ ತಡೆಗಟ್ಟಿ ಆಗಾಗ ವಿದ್ಯುತ್ ಏರಿಕೆಯನ್ನು ತಡೆಗಟ್ಟಲು ಪ್ರಯತ್ನ ಮಾಡಬಾರದೇಕೆ;	ರಾಜ್ಯದ ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ವಿದ್ಯುತ್ ಕಳ್ಳತನಗಳನ್ನು ಹಾಗೂ ಸೋರಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. • ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ಪೊಲೀಸ್ ಅಧೀಕ್ಷಕರ ನೇತೃತ್ವದಲ್ಲಿ ವಿದ್ಯುತ್ ಕಳ್ಳತನ ಹಾಗೂ ದುರುಪಯೋಗದ ಪ್ರಕರಣಗಳನ್ನು ತಡೆಗಟ್ಟಲು ಒಬ್ಬ ಡಿ.ವೈ.ಎಸ್.ಪಿ. ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಹಾಗೂ ವ್ಯಾಪ್ತಿಯಲ್ಲಿ ಬರುವ ಪ್ರತಿ ಜಿಲ್ಲೆಯಲ್ಲಿ ಪೊಲೀಸ್ ಠಾಣೆಗಳನ್ನು ರಚಿಸಿದ್ದು, ಒಬ್ಬ ಪೊಲೀಸ್ ನಿರೀಕ್ಷಕರು /ಪೊಲೀಸ್ ಉಪನಿರೀಕ್ಷಕರು ರವರ ಜೊತೆಯಲ್ಲಿ ಒಬ್ಬ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ ಸಹಾಯಕ ಇಂಜಿನಿಯರ್(ವಿ) ಇವರುಗಳು ಜಂಟಿಯಾಗಿ ವಿದ್ಯುತ್ ಸ್ಥಾವರಗಳನ್ನು ಪ್ರತಿನಿತ್ಯ ತಪಾಸಣೆ ನಡೆಸಿ ವಿದ್ಯುತ್ ಕಳ್ಳತನ ಮತ್ತು ದುರುಪಯೋಗದ ಪ್ರಕರಣಗಳನ್ನು ಪತ್ತೆ ಹಚ್ಚಿ ಕಾನೂನಿನಲ್ಲಿರುವ ನಿಯಮದಂತೆ ಕ್ರಮ ಕೈಗೊಳ್ಳಲಾಗುತ್ತಿರುತ್ತದೆ. ಇದರಿಂದ ಕಂಪನಿ ವ್ಯಾಪ್ತಿಯಲ್ಲಿ ನಡೆಯುತ್ತಿದ್ದ ವಿದ್ಯುತ್ ಕಳ್ಳತನ/ ದುರುಪಯೋಗ ಗಮನಾರ್ಹವಾಗಿ ಹತೋಟಿಯಲ್ಲಿರುತ್ತದೆ.
ಇ)	ಜನರ ಹಿತದೃಷ್ಟಿಯಿಂದ ಈ ಬಗ್ಗೆ ಸರ್ಕಾರ ಚಿಂತಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೇ?	

...2

		• ವಿದ್ಯುತ್ ಕಳ್ಳತನ ಪ್ರಕರಣದ ಆರೋಪಿತರ ವಿರುದ್ಧ ಇಂಡಿಯನ್ ಎಲೆಕ್ಟ್ರಿಸಿಟಿ ಆ್ಯಕ್ಟ್-2003 ರ ರೀತ್ಯಾ ಕ್ರಿಮಿನಲ್ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. • ವಿದ್ಯುತ್ ಕಳುವು ಪ್ರಕರಣಗಳನ್ನು ಪತ್ತೆ ಹಚ್ಚುವ ಸಲುವಾಗಿ ಲೆವಲ್-1,2,3,4 ಎಂದು ವಿಂಗಡಿಸಿ ಪ್ರತಿಯೊಂದು ವಿಭಾಗಕ್ಕೂ ಪ್ರತ್ಯೇಕವಾಗಿ ಗುರಿಯನ್ನು ನಿಗದಿಪಡಿಸಲಾಗಿದೆ. ಮೀಟರ್ ರೀಡರ್, ಲೈನ್‌ಮ್ಯಾನ್ ಹಾಗೂ ಕಾರ್ಯ ಮತ್ತು ಪಾಲನಾ ವಿಭಾಗದ ಇಂಜಿನಿಯರ್ ರವರೊಂದಿಗೆ ಸಂಪರ್ಕವಿಟ್ಟುಕೊಂಡು ಮಾಹಿತಿ ಸಂಗ್ರಹಿಸಲಾಗುತ್ತಿದೆ. • ವಿದ್ಯುತ್ ಕಳ್ಳತನ/ಸೋರಿಕೆ/ದುರುಪಯೋಗ ಪ್ರಕರಣಗಳನ್ನು ಪತ್ತೆ ಹಚ್ಚುವ ಸಲುವಾಗಿ ಸ್ಥಾವರಗಳ ವಿವರಗಳು, ವಿದ್ಯುತ್ ಬಳಕೆಯ ವಿವರಗಳನ್ನು ವೈಜ್ಞಾನಿಕ ರೀತಿಯಲ್ಲಿ ಪರಿಶೀಲಿಸಿ ಅನಿರೀಕ್ಷಿತ/ ಸಾಮೂಹಿಕ ದಾಳಿ ನಡೆಸಿ ವಿದ್ಯುತ್ ಕಳುವು ಪ್ರಕರಣಗಳನ್ನು ಪತ್ತೆ ಹಚ್ಚಲಾಗುತ್ತಿದೆ. • ವಿದ್ಯುತ್ ಕಳ್ಳತನ/ ಸೋರಿಕೆ/ ದುರುಪಯೋಗ ಪ್ರಕರಣಗಳಲ್ಲಿ ಸಾರ್ವಜನಿಕರು ತೊಡಗದಂತೆ ದಿನ ಪತ್ರಿಕೆಗಳಲ್ಲಿ ಹಾಗೂ ಟಿ.ವಿ/ ಎಲೆಕ್ಟ್ರಾನಿಕ್ ಮೀಡಿಯಾಗಳ ಮೂಲಕ ಪ್ರಕಟಣೆ ನೀಡಲಾಗಿದೆ. • ಗ್ರಾಹಕರಿಗೆ ನೀಡಲಾಗುತ್ತಿರುವ ವಿದ್ಯುತ್ ಬಿಲ್ಲಿನ ಹಿಂಬದಿಯ ಪುಟದಲ್ಲಿ ವಿದ್ಯುತ್ ಕಳ್ಳತನಕ್ಕೆ ಕಠಿಣ ಶಿಕ್ಷೆ ಆಗುತ್ತದೆಂದೂ ಪ್ರಕಟಿಸಿ, ವಿದ್ಯುತ್ ಕಳ್ಳತನದ ಪ್ರಕರಣದ ಬಗ್ಗೆ ಮಾಹಿತಿಯನ್ನು ನೀಡಲು ಸಂಬಂಧಿಸಿದ ಜಾಗೃತದಳ ಇಂಜಿನಿಯರುಗಳ ಇಲಾಖಾ ಮೊಬೈಲ್ ಸಂಖ್ಯೆಯನ್ನೂ ಸಹ ಮುದ್ರಣ ಮಾಡಿ ವಿತರಿಸಲಾಗುತ್ತಿದೆ. • ಗ್ರಾಹಕರ ವಿದ್ಯುತ್ ಬಳಕೆಯ ವಿವರಗಳನ್ನು ಅಧ್ಯಯನ ಮಾಡಿ, ಅಲ್ಲಿಯೂ ಕೂಡ ವಿದ್ಯುತ್ ಕಳುವು ಪ್ರಕರಣಗಳನ್ನು ಪತ್ತೆ ಹಚ್ಚಲು ಕ್ರಮ ಕೈಗೊಳ್ಳಲಾಗುತ್ತಿದೆ.

ಸಂಖ್ಯೆ: ಎನರ್ಜಿ 215 ಇಬಿಎಸ್ 2021

(ವಿ ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ
ಮತ್ತು ಸಂಸ್ಕೃತಿ ಸಚಿವರು.